ಕರ್ನಾಟಕ ಸರ್ಕಾರ

# ಭ್ರಷ್ಟಾಚಾರ ನಿಗ್ರಹ ದಳ

## ಪತ್ರಿಕಾ ಪ್ರಕಟಣೆ

ದಿನಾಂಕ 08/01/2019.

ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಬಂಡೇನಲ್ಲಸಂದ್ರ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿರವರು ತಮ್ಮ ಸಂಘದ ಆಡಳಿತ ಮಂಡಳಿಯ ಚುನಾವಣೆಯನ್ನು ನಡೆಸಲು ಅಗತ್ಯವಿದ್ದ ದಾಖಲೆಗಳನ್ನು ಪರಿಶೀಲಿಸಿ, ಸಹಕಾರ ಚುನಾವಣಾ ಆಯೋಗಕ್ಕೆ ಶಿಫಾರಸ್ಸು ಮಾಡಲು ಕೋರಿರುತ್ತಾರೆ. ಶ್ರೀ.ಮಂಜುನಾಥ್ ಸ್ವಾಮಿ, ಸಹಕಾರ ಅಭಿವೃದ್ದಿ ಅಧಿಕಾರಿ, ಆನೇಕಲ್ ತಾಲ್ಲೂಕು ರವರು ದಾಖಲೆಗಳನ್ನು ಪರಿಶೀಲಿಸಿ ಸಹಕಾರ ಚುನಾವಣಾ ಆಯೋಗಕ್ಕೆ ವರದಿಯನ್ನು ಮಂಡಿಸಲು ರೂ.7,000/- ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:08/01/2019 ರಂದು ದೂರುದಾರರಿಂದ ಶ್ರೀ.ಮಂಜುನಾಥ್ ಸ್ವಾಮಿ ರವರು ರೂ.6,000/- ಲಂಚದ ಹಣವನ್ನು ಪಡೆದುಕೊಂಡಿದ್ದು, ಬೆಂಗಳೂರು ಗ್ರಾಮಾಂತರ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆ. ಆರೋಪಿಯನ್ನು ದಸ್ತಗಿರಿ ಮಾಡಿ, ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ, ತನಿಖೆ ಮುಂದುವರೆದಿದೆ.